ಆ)-ಇಲ್ಲ-

ಇ)ಸರ್ಕಾರಿ ಆಸ್ಪತ್ರೆಗಳಿಗೆ ಆಯವ್ಯಯದಲ್ಲಿ ಅನುದಾನ ಹೆಚ್ಚಿಸಲಾಗಿದೆ. ಹಾಗೂ ಆಲೂರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ನಿಯಮಗಳನ್ವಯ ಅನುದಾನವನ್ನು ಹಂಚಿಕೆ ಹಾಕಲಾಗುವುದು.

ಸಕಲೇಶಪುರ ತಾಲ್ಲೂಕಿನಲ್ಲಿ ವೈದ್ಯರ ಕೊರತೆ

2763 (3436) ಶ್ರೀ ಶಿವಪ್ಪ ಬಿ.ಬಿ. (ಸಕಲೇಶಪುರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ)ಆಲೂರು ಮತ್ತು ಸಕಲೇಶಪುರ ತಾಲ್ಲೂಕಿನಲ್ಲಿ ಸರ್ಕಾರಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ)ಬಂದಿದ್ದರೆ ಏನು ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ)ಬಂದಿದೆ.

ಆ)ಆಲೂರು ಮತ್ತು ಸಕಲೇಶಪುರ ತಾಲ್ಲೂಕು ಆಸ್ಪತ್ರೆಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ಸ್ನಾತಕೋತ್ತರ ವ್ಯಾಸಂಗವನ್ನು ಪೂರೈಸಿರುವ ವೈದ್ಯರುಗಳನ್ನು ನೇಮಕ ಮಾಡವು ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಹಾಸನ ಜಿಲ್ಲೆಗೆ ಆಯುರ್ವೇದಿಕ್ ಆಸ್ಪತ್ರೆ.

2764 (3437) ಶ್ರೀ ಶಿವಪ್ಪ ಬಿ.ಬಿ. (ಸಕಲೇಶಪುರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ)ಹಾಸನ ಜಿಲ್ಲೆಯಲ್ಲಿ ಹೋಮಿಯೋಪತಿ ಮತ್ತು ಆಯುರ್ವೇದಿಕ್ ಆಸ್ಪತ್ರೆಗಳು ಇಲ್ಲ ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ)ಬಂದಿದ್ದರೆ ಆಯುರ್ವೇದಿಕ್ ಹಾಗೂ ಹೋಮಿಯೋಪತಿ ಆಸ್ಪತ್ರೆ ತೆರೆಯಬೇಕೆಂಬ ಬೇಡಿಕೆಗಳು ಸಾರ್ವಜನಿಕರಿಂದ ಬಂದಿದೆಯೆ;

ಇ)ಬಂದಿದ್ದರೆ, ಹೋಮಿಯೋಪತಿ ಹಾಗೂ ಆಯುರ್ವೇದಿಕ್ ಆಸ್ಪತ್ರೆ ತೆರೆಯುವ ಉದ್ದೇಶ ಸರ್ಕಾರಕ್ಕಿದೆಯೇ?

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ)ಹಾಸನ ಜಿಲ್ಲೆಯಲ್ಲಿ 4 ಸರ್ಕಾರಿ ಆಯುರ್ವೇದ ಹಾಗೂ ಒಂದು ಹೋಮಿಯೋಪತಿ ಆಸ್ಪತ್ರೆಗಳು ಇರುತ್ತವೆ. ಅದಲ್ಲದೇ 50 ಆಯುರ್ವೇದ, 5 ಯುನಾನಿ ಮತ್ತು ಒಂದು ಹೋಮಿಯೋಪತಿ ಚಿಕಿತ್ಸಾಲಯಗಳೂ ಕಾರ್ಯನಿರ್ವಹಿಸುತ್ತವೆ.

ಆ) ಹೌದು.

ಇ) ಸದ್ಯಕ್ಕೆ ಸರ್ಕಾರದ ಇಂತಹ ಉದ್ದೇಶವಿರುವುದಿಲ್ಲ.

ಚನ್ನಗಿರಿ ತಾಲ್ಲೂಕಿನಲ್ಲಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗ ತೆರೆಯುವುದು.

2765 (3398) ಶ್ರೀ ವಡ್ನಾಳ್ ರಾಜಣ್ಣ (ಚೆನ್ನಗಿರಿ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಚೆನ್ನಗಿರಿ ತಾಲ್ಲೂಕಿನಲ್ಲಿ ಬರುವ ಸಂತೆ ಬೆನ್ನೂರು, ತ್ಯಾವಣಗಿ, ಬಸವಕಲ್ಯಾಣ, ನಲ್ಲೂರು, ತಾವರೆಕೆರೆಗಳಲ್ಲಿ ಇರುವ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗಗಳನ್ನು ಎಂದು ತೆರೆಯಲಾಗುವುದು?

2) ಪದವಿ ಪೂರ್ವ ಕಾಲೇಜುಗಳಲ್ಲಿ ಕೊಠಡಿಗಳ ಕೊರತೆ ಎಷ್ಟು?

3) ಕೊಠಡಿಗಳ ಕೊರತೆಯನ್ನು ನಿವಾರಿಸಲು ತೆಗೆದುಕೊಂಡಿರುವ ಕ್ರಮಗಳೇನು?

4) ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರ ಸಂಖ್ಯೆ ಎಷ್ಟು?

5) ಖಾಲಿ ಇರುವ ಹುದ್ದೆಗಳನ್ನು ಬರುವ ಶೈಕ್ಷಣಿಕ ವರ್ಷದ ಪ್ರಾರಂಭದ ಮೊದಲೇ ತುಂಬಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

1) ಚೆನ್ನಗಿರಿ ತಾಲ್ಲೂಕಿನ ಸಂತೆಬೆನ್ನೂರಿನಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ವಿಜ್ಞಾನ ವಿಭಾಗವಿದೆ. ತ್ಯಾವಣಗಿ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕನಿಷ್ಠ 25 ವಿದ್ಯಾರ್ಥಿಗಳು ವಿಜ್ಞಾನ ವಿಷಯ ಅಪೇಕ್ಷಿಸಿ ಮುಂದೆ ಬಂದಲ್ಲಿ ವಿಜ್ಞಾನ ವಿಭಾಗವನ್ನು ತೆರೆಯಲಾಗುವುದು. ತಾವರೆಕೆರೆ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಥಮ ಪಿಯುಸಿಯಲ್ಲಿ 52 ಹಾಗೂ ದ್ವಿತೀಯ ಪಿಯುಸಿಯಲ್ಲಿ 16 ವಿದ್ಯಾರ್ಥಿಗಳಿದ್ದಾರೆ ಯಾದ್ದರಿಂದ, ವಿಜ್ಞಾನ ವಿಭಾಗದ ಅವಶ್ಯಕತೆಯಲ್ಲ. ಬಸವ ಕಲ್ಯಾಣ ಹಾಗೂ ನಲ್ಲೂರುಗಳಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಲ್ಲ.

2) ಚೆನ್ನಗಿರಿ ಮತ್ತು ತ್ಯಾವಣಗಿ ಸರ್ಕಾರಿ ಪದವಿಪೂರ್ವ ಕಾಲೇಜುಗಳಿಗೆ ಹೆಚ್ಚುವರಿ ಕೊಠಡಿಗಳ ಅವಶ್ಯಕತೆ ಇದೆ.

3) ಈ ಎರಡು ಪದವಿ ಪೂರ್ವ ಕಾಲೇಜುಗಳ ಹೆಚ್ಚುವರಿ ಕೊಠಡಿಗಳ ನಿರ್ಮಾಣ ಕಾಮಗಾರಿಗಾಗಿ ತಲಾ ರೂ. 6.00ಲಕ್ಷಗಳ ಅಂದಾಜನ್ನು ತಯಾರಿಸಲಾಗಿದ್ದು 1999-200ಕ್ಕೆ ತಲಾ ರೂ. 2.00 ಲಕ್ಷಗಳನ್ನು ಮಂಜೂರು ಮಾಡಲು ಪರಿಗಣಿಸಲಾಗುವುದು ಪ್ರಸ್ತಾವನೆಯನ್ನು ಪರಿಶೀಲಿಸಲಾಗುವುದು.

4) ಸಂತೆ ಬೆನ್ನೂರು, ತ್ಯಾವಣಗಿ ಹಾಗೂ ತಾವರೆಕೆರೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 20 ಉಪನ್ಯಾಸಕರಿದ್ದಾರೆ.